ಎಂಬ ಬಗ್ಗೆ ಬಿ.ಆರ್.ಪಾಟೀಲರು, ನಾವು ಎಲ್ಲಾ ಹಿರಿಯ ಶಾಸಕರು ಕೊಟ್ಟಿದ್ದೇವೆ.

ಅಧ್ಯಕ್ಷರು: ತೆಗೆದುಕೊಳ್ಳುತ್ತೇನೆ.

ಶ್ರೀ ಎನ್. ಧರ್ಮಸಿಂಗ್: ಅದರ ಬಗ್ಗೆ ಮೊದಲು discussion ಆಗಲಿ. ಅದು ಆದ ಮೇಲೆ ಮಾಧುಸ್ವಾಮಿಯವರು ಹೇಳಿದ ವಿಷಯ ಚರ್ಚೆಯಾಗಲಿ ಮತ್ತು ನಿಯಮ 62ರಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ಬಗ್ಗೆ ಎಲ್ಲಾ ಶಾಸಕರು ಕೊಟ್ಟಿದ್ದಾರೆ. ಅದರ ಬಗ್ಗೆ ಚರ್ಚೆಯಾಗಬೇಕು.

ಅಧ್ಯಕ್ಷರು: ರಾತ್ರಿ 12 ಗಂಟೆಯವರಿಗೂ ಸಭೆ ನಡೆಸುತ್ತೇನೆ. ಆ ಎಲ್ಲಾ ವಿಚಾರಗಳನ್ನು ನಾನು ತೆಗೆದುಕೊಳ್ಳುತ್ತೇನೆ.

ಶ್ರೀ ಎನ್. ಧರ್ಮಸಿಂಗ್: ಆಗಲಿ, ಚರ್ಚೆಗಳು ಆಗಲಿ.

ಅಧ್ಯಕ್ಷರು: ಶಂಕರಮೂರ್ತಿಯವರ, ordinance replacement ಗೆ ಸಂಬಂಧಪಟ್ಟ Bill ಒಂದು ಇದೆ. ಅದಾದ ಮೇಲೆ ತೆಗೆದುಕೊಳ್ಳೋಣ.

ಶ್ರೀ ಬಿ.ಆರ್.ಪಾಟೀಲ್: ಮಾನ್ಯ ಮಂತ್ರಿಗಳದ್ದು ಆದ ಮೇಲೆ ನಾನು ಪ್ರಸ್ತಾಪಿಸಿದ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳಬೇಕು.

ಶಾಸನ ರಚನೆ

ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕ, 2007

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಎಚ್.ಶಂಕರಮೂರ್ತಿ(ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, 2007ರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2007ರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಎಚ್.ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, 2007ರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಯಿತು.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕ, 2007

ಪರ್ಯಾಲೋಚನಾ ಪ್ರಸ್ತಾವ.

ಶ್ರೀ ಡಿ.ಎಚ್.ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, 2007ರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ, ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಡಿ.ಎಚ್.ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ವೃತ್ತಿ ಶಿಕ್ಷಣ ನಯಂತ್ರಣ ಶುಲ್ಕ ನಿಗದಿ ಕಾನೂನನ್ನು ನಾವು ಒಂದು ವರ್ಷಕ್ಕೆ ಅಂದರೆ 2006ರಲ್ಲಿ pass ಮಾಡಿದ ಕಾನೂನನ್ನು ಈ Private un-aided Institutions ಜೊತೆಗೆ ನಡೆದ ಮಾತುಕತೆ ಹಿನ್ನಲೆಯಲ್ಲಿ Supreme Court ಆ ಮಾತುಕತೆಯ ಸಾರಾಂಶವನ್ನು ಎತ್ತಿಹಿಡಿದ ಹಿನ್ನಲೆಯಲ್ಲಿ 2006ರ ಏಪ್ರಿಲ್‌ನಲ್ಲಿ pass ಮಾಡಿದ ನಿಯಮಾವಳಿಗಳನ್ನು ಒಂದು ವರ್ಷಕ್ಕೆ ತಡೆಹಿಡಿಯಬೇಕೆಂದು ಕಳೆದ ಸದನದಲ್ಲಿ ತಾವೆಲ್ಲ ಒಪ್ಪಿಗೆ ಕೊಟ್ಟಿದ್ದಿರಿ.